ಶ್ರೀ ಎಸ್. ಆರ್. ಬೊಮ್ಮಾಯಿ(ಕಂದಾಯ, ಯೋಜನಾ ಹಾಗೂ ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ಈ ಪೈಕಿ ಕೆಲವೊಂದು ಭಾಗಗಳಲ್ಲಿ ಕೃಷಿಗೆ ಯೋಗ್ಯವಲ್ಲದ ಜಮೀನುಗಳಿದ್ದು, ಅವುಗಳಲ್ಲಿ ವ್ಯವಸಾಯ ಮಾಡಿರುವುದಿಲ್ಲ.

ಇ) ಇಲ್ಲಾ

ಈ) ಕಾರ್ಖಾನೆಯವರಿಗೆ ಆದೇಶ ಕೊಡಲು ಬರುವುದಿಲ್ಲ. ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಕ್ತ ನಿರ್ದೇಶನ ಕೊಡಲಾಗಿದೆ.

ಹಿಂದುಳಿದ ವರ್ಗದವರ ವಿದ್ಯಾರ್ಥಿನಿಲಯಗಳು

೧೫೭೮. ಶ್ರೀ ಡಿ. ಟಿ. ಜಯಕುಮಾರ್ (ನಂಜನಗೂಡು).—ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ಹಿಂದುಳಿದ ಪಂಗಡಕ್ಕೆ ಸೇರಿದ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು) ವಿವರ ಕೊಡುವುದು.

ಆ) ೧೯೮೮-೮೯ನೇ ಸಾಲಿನಲ್ಲಿ ಈ ರೀತಿಯ ಎಷ್ಟು ನಿಲಯಗಳನ್ನು ಎಲ್ಲೆಲ್ಲಿ ತೆರೆಯಲು ಉದ್ದೇಶಿಸಲಾಗಿದೆ ?

ಶ್ರೀ ಜಿ. ಬಸವಣ್ಣಪ್ಪ (ಸಮಾಜ ಕಲ್ಯಾಣ ಸಚಿವರು).—

ಅ) ಹಿಂದುಳಿದ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕ ವಿದ್ಯಾರ್ಥಿನಿಲಯಗಳು ಇರುವುದಿಲ್ಲ. ಈ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ನಿಲಯಗಳಿಂದು ಹೆಸರಿಸಿ ಹಿಂದುಳಿದ ಪಂಗಡದ ವಿದ್ಯಾರ್ಥಿಗಳಿಗೂ ಸಹ ನಿಲಯದಲ್ಲಿ ಅವಕಾಶ ಮಾಡಿಕೊಡಲಾಗಿದೆ. ವಿದ್ಯಾರ್ಥಿನಿಲಯಗಳ ಸಂಖ್ಯೆ. ೯೪೭. (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

ಆ) ಹಿಂದುಳಿದ ಪಂಗಡದ ವಿದ್ಯಾರ್ಥಿನಿಲಗಳಿಗಾಗಿಯೇ ಪ್ರತ್ಯೇಕ ವಿದ್ಯಾರ್ಥಿನಿಲಯಗಳನ್ನು ತೆರೆಯಲು ಅವಕಾಶವಿರುವುದಿಲ್ಲ. ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳಲ್ಲಿ ಹಿಂದುಳಿದ ಪಂಗಡದ ವಿದ್ಯಾರ್ಥಿಗಳಿಗೂ ಸಹ ನಿಲಯಗಳಲ್ಲಿ ಅವಕಾಶವಿರುತ್ತದೆ. ೧೯೮೮-೮೯ನೇ ಸಾಲಿಗೆ ೮೬ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಇದೆ. ಎಲ್ಲೆಲ್ಲಿ ತೆರೆಯಬೇಕೆಂಬ ಮಾಹಿತಿಯನ್ನು ಜಿಲ್ಲಾ ಪರಿಷತ್‌ನಿಂದ ಪಡೆದ ನಂತರ ತೀರ್ಮಾನ ತೆಗೆದುಕೊಳ್ಳಲಾಗುವುದು.